ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ: DEPARTMENT / SUBJECT: ಸಂತಾಪ

ಪತ್ರಿಕೆಯ ಹೆಸರು : NAME OF THE NEWS PAPER : ವಿಜಯವಾಣಿ      ದಿನಾಂಕ : DATE : 14/04/2019

# ಪದ್ಮಶ್ರೀ ಡಾ. ಎಸ್.ಕೆ. ಶಿವಕುಮಾರ್ ಇನ್ನಿಲ್ಲ

14/4/19



ಬೆಂಗಳೂರು: ಕರ್ನಾಟಕ ವಿಜ್ಞಾನ ಮತ್ತು ತಂತ್ರಜ್ಞಾನ ಅಕಾಡೆಮಿ ಅಧ್ಯಕ್ಷ, 'ಇಸ್ರೋ' ಉಪಗ್ರಹ ಕೇಂದ್ರದ ಮಾಜಿ ನಿರ್ದೇಶಕ, 'ಪದ್ಮಶ್ರೀ' ಡಾ. ಶ್ರೀರಂಗಪಟ್ಟಣ ಕೃಷ್ಣಮೂರ್ತಿ ಶಿವಕುಮಾರ್ (66) ಶನಿವಾರ ನಿಧನರಾದರು.

» **ಇಸ್ರೋ ಉಪಗ್ರಹ ಕೇಂದ್ರದ ನಿರ್ದೇಶಕರಾಗಿ ಮಹತ್ವದ ಸೇವೆ**

ಜಾಂಡೀಸ್‌ನಿಂದ ಬಳಲುತ್ತಿದ್ದ ಶಿವಕುಮಾರ್ ಅವರನ್ನು 15 ದಿನಗಳ ಹಿಂದೆ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಇಸ್ರೋ ಲೇಔಟ್‌ನಲ್ಲಿರುವ ನಿವಾಸಕ್ಕೆ ಇಸ್ರೋ ಮಾಜಿ ಅಧ್ಯಕ್ಷ ಡಾ. ಎ.ಎಸ್. ಕಿರಣ್‌ಕುಮಾರ್, ಅಹ್ಮದಾಬಾದ್ ಸ್ಪೇಸ್ ಅಪ್ಲಿಕೇಷನ್ ಕೇಂದ್ರದ ಡಾ. ಜಯರಾಮ್ ಹಾಗೂ ಇಸ್ರೋ ಅಧಿಕಾರಿಗಳು ಭೇಟಿ ನೀಡಿ ಅಂತಿಮ ದರ್ಶನ ಪಡೆದರು. ಬನಶಂಕರಿಯ ಚಿತಾಗಾರದಲ್ಲಿ ಅಂತ್ಯಕ್ರಿಯೆ ನಡೆಯಿತು. ಪತ್ನಿ ಮತ್ತು ಇಬ್ಬರು ಹೆಣ್ಣುಮಕ್ಕಳನ್ನು ಅವರು ಅಗಲಿದ್ದಾರೆ.

ಮಂಡ್ಯ ಜಿಲ್ಲೆಯ ಕೃಷ್ಣರಾಜಸಾಗರದವರಾದ ಶಿವಕುಮಾರ್, ವಿಜ್ಞಾನ ಕ್ಷೇತ್ರದಲ್ಲಿನ ತಮ್ಮ ಸಾಧನೆಗಾಗಿ ರಾಜ್ಯೋತ್ಸವ ಪ್ರಶಸ್ತಿ, ಮೈಸೂರು ವಿವಿ ಗೌರವ ಡಾಕ್ಟರೇಟ್ ಹಾಗೂ 2015ರಲ್ಲಿ ಪ್ರತಿಷ್ಠಿತ 'ಪದ್ಮಶ್ರೀ' ಗೌರವಗಳಿಗೆ ಭಾಜನರಾಗಿದ್ದಾರೆ.

## ಚಂದ್ರಯಾನ ಯೋಜನೆ ಮಿದುಳು

2008ರಲ್ಲಿ ಭಾರತದ 'ಚಂದ್ರಯಾನ' ಉಡಾವಣೆಗೊಳಿಸಿದ್ದ ಸಂದರ್ಭದಲ್ಲಿ ಟೆಲಿಮೆಟ್ರಿ, ಟ್ರ್ಯಾಕಿಂಗ್ ಆ್ಯಂಡ್ ಕಮಾಂಡ್ ನೆಟ್‌ವರ್ಕ್ ವಿಭಾಗದ ನಿರ್ದೇಶಕರಾಗಿ ಶಿವಕುಮಾರ್ ಕಾರ್ಯನಿರ್ವಹಿಸುತ್ತಿದ್ದರು. ಬೆಂಗಳೂರಿನಲ್ಲಿ ಸ್ಥಾಪಿಸಿರುವ ಇಂಡಿಯನ್ ಡೀಪ್ ಸ್ಪೇಸ್ ನೆಟ್‌ವರ್ಕ್‌ನ 32 ಮೀ. ಆ್ಯಂಟೆನಾದ ಸ್ಥಾಪನೆ ಮತ್ತು ನಿರ್ವಹಣೆಯ ಯೋಜನಾ ನಿರ್ದೇಶಕರಾಗಿದ್ದರು. ಈ ಆ್ಯಂಟೆನಾ ಮುಖಾಂತರ 'ಚಂದ್ರಯಾನ 1' ಮತ್ತು 'ಮಂಗಳಯಾನ'ದ ಪಥ ಗ್ರಹಿಸಲಾಗುತ್ತಿದೆ. 2012ರಲ್ಲಿ ಇಸ್ರೋ ಉಪಗ್ರಹ ಕೇಂದ್ರದ ನಿರ್ದೇಶಕರಾಗಿದ್ದ ಶಿವಕುಮಾರ್, ಹಲವು ಉಪಗ್ರಹಗಳ ಯಶಸ್ವಿ ಉಡಾವಣೆಯಲ್ಲಿ ಮಹತ್ವದ ಪಾತ್ರವನ್ನು ವಹಿಸಿದ್ದರು.